19

# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 796 |
| ಸದಸ್ಯರ ಹೆಸರು | : | ಶ್ರೀ. ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 23/07/2024 |
| ಉತ್ತರಿಸುವ ಸಚಿವರು | : | ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು |

| | ಪ್ರಶ್ನೆ | ಉತ್ತರ |
|---|---|---|
| ಅ | ಪುರಸಭೆ ಮತ್ತು ನಗರಸಭೆ ಸದಸ್ಯರ ಗೌರವ ಧನ ಹೆಚ್ಚಳಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು; | ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿನ ಚುನಾಯಿತ ಸದಸ್ಯರಿಗೆ ಸರ್ಕಾರದ ಆದೇಶ ಸಂಖ್ಯೆ:ನಅಇ 156 ಎಂಎಲ್‌ಆರ್ 2015; ದಿನಾಂಕ:15/09/2016 ರಲ್ಲಿ ನಿಗದಿಪಡಿಸಿರುವಂತೆ ಮಾಸಿಕ ಗೌರವಧನವನ್ನು ನೀಡಲಾಗುತ್ತಿದೆ. ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳ ಅಧ್ಯಕ್ಷ-ಉಪಾಧ್ಯಕ್ಷರು, ಸದಸ್ಯರು ಹಾಗೂ ಮಹಾನಗರ ಪಾಲಿಕೆಗಳ ಮೇಯರ್-ಉಪಮೇಯರ್, ಸದಸ್ಯರ ಗೌರವಧನವನ್ನು ಹೆಚ್ಚಳ ಮಾಡುವುದಕ್ಕಾಗಿ ಪರಿಶೀಲಿಸಿ, ಪ್ರಸ್ತುತ ನೀಡುತ್ತಿರುವ ಗೌರವಧನವನ್ನು ಪರಿಷ್ಕರಿಸಲು ಆರ್ಥಿಕ ಇಲಾಖೆಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿತ್ತು. ಆರ್ಥಿಕ ಇಲಾಖೆಯು ದಿನಾಂಕ:02/05/2023 ಮತ್ತು ದಿ:23/01/2024 ರಂದು ಗೌರವಧನವನ್ನು ಪರಿಷ್ಕರಿಸುವ ಪ್ರಸ್ತಾವನೆಯನ್ನು ತಿರಸ್ಕರಿಸಿರುತ್ತದೆ. ಪ್ರಸ್ತುತ ಗೌರವಧನ ಪರಿಷ್ಕರಣೆ ಮಾಡುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿ ಇರುವುದಿಲ್ಲ. |
| ಆ | ಸರ್ಕಾರ ಕ್ರಮ ಕೈಗೊಂಡಿದ್ದಲ್ಲಿ ಎಷ್ಟು ಗೌರವ ಧನ ಹೆಚ್ಚಳ ಮಾಡಲಾಗಿದೆ; (ಮಾಹಿತಿ ನೀಡುವುದು) | |
| ಇ | ಯಾವ ಕಾಲಮಿತಿಯೊಳಗೆ ಸದಸ್ಯರ ಗೌರವ ಧನ ಹೆಚ್ಚಳ ಮಾಡಲಾಗುವುದು? (ಮಾಹಿತಿ ನೀಡುವುದು); | |

ಸಂಖ್ಯೆ:ನಅಇ 46 ಎಲ್‌ಸಿಕ್ಯೂ 2024.

(ರಹೀಂ ಖಾನ್)
ಪೌರಾಡಳಿತ ಹಾಗೂ ಹಜ್ ಸಚಿವರು